**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ/ 522 /ಗ್ರಾಪಂಅ/2013

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 06-05-2014.

**ಇವರಿಂದ:**

ಸರ್ಕಾರದ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
**ಬೆಂಗಳೂರು.**

**ಇವರಿಗೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯತಿ, ಬೆಂಗಳೂರು (ಗ್ರಾ), ಬೆಳಗಾಂ, ಬಳ್ಳಾರಿ, ಬೀದರ್, ಚಿಕ್ಕಮಗಳೂರು, ಚಿತ್ರದುರ್ಗ, ಯಾದಗಿರಿ, ಕೋಲಾರ, ಮಂಡ್ಯ, ರಾಯಚುರು, ಉಡುಪಿ, ಚಿಕ್ಕಬಳ್ಳಾಪುರ. ಈ ಜಿಲ್ಲೆಗಳಿಂದ ಮಾಹಿತಿ ಬರಬೇಕಾಗಿದೆ,

ಮಾನ್ಯರೆ,

**ವಿಷಯ:** ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಕಲ್ಯಾಣಕ್ಕಾಗಿ ಶೇ 25 ರಷ್ಟು ಹಣವನ್ನು ಖರ್ಚು ಮಾಡಿದ ಪ್ರಗತಿ ವಿವರವನ್ನು ಪ್ರತಿ ತಿಂಗಳು ದಿನಾಂಕ 5 ರೊಳಗೆ ಕಳುಹಿಸುವಲ್ಲಿ ನಿರ್ಲಕ್ಷ್ಯತೆ ತೋರುತ್ತಿರುವ ಬಗ್ಗೆ.

**ಉಲ್ಲೇಖ:** ಇದೇ ಸಮಸಂಖ್ಯೆಯ ಸರ್ಕಾರದ ಪತ್ರ ದಿ: 09-04-2014. ಮತ್ತು 25-04-2014.

****

ಮೇಲ್ಕಂಡ ವಿಷಯ ಮತ್ತು ಉಲ್ಲೇಖದ ಕಡೆಗೆ ಗಮನ ಸೆಳೆಯಲಾಗಿದೆ.

ಉಲ್ಲೇಖಿತ ಸರ್ಕಾರದ ಪತ್ರದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಕಲ್ಯಾಣಕ್ಕಾಗಿ ಶೇ 25 ರಷ್ಟು ಹಣವನ್ನು ಖರ್ಚು ಮಾಡಿದ ಪ್ರಗತಿ ವಿವರವನ್ನು ಪ್ರತಿ ತಿಂಗಳು ದಿನಾಂಕ 5 ರೊಳಗೆ ಕಳುಹಿಸುವಂತೆ ಕೋರಲಾಗಿತ್ತು. **ಆದರೆ ಇದುವರೆವಿಗೂ ತಮ್ಮಿಂದ ಯಾವುದೇ ಮಾಹಿತಿ ಸ್ವೀಕೃತವಾಗಿರುವುದಿಲ್ಲ. ಮಾರ್ಚ್ ಅಂತ್ಯದ ಪ್ರಗತಿಯ ವರದಿಯು ಬಹಳ ಮುಖ್ಯವಾಗಿರುತ್ತದೆ.** ಇದರಿಂದ ಆಯಾ ಆರ್ಥಿಕ ವರ್ಷದಲ್ಲಿ ಪ.ಜಾ/ ಪ.ವರ್ಗಗಳ ಜನಾಂಗಕ್ಕೆ ಮೀಸಲಿರಿಸಿರುವ ಅನುದಾನದಲ್ಲಿ ಎಷ್ಟು ವೆಚ್ಚ ಮಾಡಲಾಗಿದೆ ಎಂಬುದನ್ನು ತಿಳಿದುಕೊಳ್ಳಬಹುದಾಗಿದೆ. ಆಯಾ ತಾಲ್ಲೂಕಿನ ಗ್ರಾಮ ಪಂಚಾಯತಿವಾರು ವಿವರಗಳನ್ನು ನೀಡಲು ಕೋರಿದೆ. ಮುಂದೆ ಇದನ್ನು ಪಂಚತಂತ್ರದಲ್ಲಿ ಅಳವಡಿಸಲು ಅಗತ್ಯ ಕ್ರಮವಹಿಸಲಾಗುವುದು. ಈ ವಿಷಯವನ್ನು ಮೊದಲ ಆದ್ಯತೆ ಎಂದು ಪರಿಗಣಿಸುವುದು. **ಅಲ್ಲದೇ ವಿಳಂಬಕ್ಕೆ ಮತ್ತಷ್ಟು ಅವಕಾಶ ನೀಡದೆ ವೈಯಕ್ತಿಕ ಗಮನ ಹರಿಸಿ, ಕೂಡಲೇ ಮಾಹಿತಿ ಕಳುಹಿಸಿ ಕೊಡಲು ಕೋರಿದೆ, ಹಾಗು ಇನ್ನೂ ಮುಂದೆ ಪ್ರಗತಿ ವರದಿಯನ್ನು ಪ್ರತಿ ತಿಂಗಳು ದಿನಾಂಕ 5 ರೊಳಗೆ ಕಳುಹಿಸುವುದು, ತಪ್ಪಿದಲ್ಲಿ ಈ ಪ್ರಕರಣಕ್ಕೆ ಸಂಬಂಧಿಸಿದ ಅಧಿಕಾರಿಗಳಿಗೆ "ಕಾರಣ ಕೇಳುವ ನೋಟೀಸ್" ನೀಡುವಂತೆ** ತಮಗೆ ತಿಳಿಸುತ್ತಾ, ಸದರಿ ಮಾಹಿತಿಯನ್ನು (ಇಮೇಲ್ ವಿಳಾಸ **sogp2011@gmail.com** ಮತ್ತು ಫ್ಯಾಕ್ಸ್ ಸಂಖ್ಯೆ: **080-22353925** ಮೂಲಕ) ಸರ್ಕಾರಕ್ಕೆ ಕಳುಹಿಸುವಂತೆ ಮತ್ತೊಮ್ಮೆ ತಮ್ಮನ್ನು ಕೋರಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

(ಗಂಗಾರಾಮ್ ಬಡೇರಿಯಾ)
ಸರ್ಕಾರದ ಕಾರ್ಯದರ್ಶಿ(ಪಂ.ರಾಜ್)
ಗ್ರಾಮೀಣ ಅಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಪ್ರತಿ:**

1. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
2. ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.